# Akashvani : Bangalore

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**12.07.2024 / 14.30 hrs**

ಮುಖ್ಯಾಂಶಗಳು

**೧. ಇದೇ ನವೆಂಬರ್ ೧೯ ರಿಂದ ೨೧ರ ವರೆಗೆ ಪ್ರತಿಷ್ಠಿತ ಬೆಂಗಳೂರು ಟೆಕ್ ಸಮಿಟ್ ೨೦೨೪ - ಮುಖ್ಯಮಂತ್ರಿ ಸಿದ್ದರಾಮಯ್ಯ**

**೨. ಡೆಂಘಿ ಜ್ವರ ನಿಯಂತ್ರಣಕ್ಕೆ ಹಲವು ಜಿಲ್ಲೆಗಳಲ್ಲಿ ಸಮರೋಪಾದಿಯಲ್ಲಿ ಕ್ರಮ**

**೩. ರಕ್ಷಣಾ ಇಲಾಖೆಯ ಹಲವು ಪಡೆಗಳಿಗೆ ಮಾಜಿ ಅಗ್ನಿವೀರರ ಮರುನೇಮಕಕ್ಕೆ ಪ್ರಕ್ರಿಯೆ ಆರಂಭ**

**೪. ಜನಪ್ರಿಯ ಕಲಾವಿದೆ ಅಪರ್ಣಾ ನಿಧನಕ್ಕೆ ಗಣ್ಯರ ಸಂತಾಪ**

**<><*<><>*><>**

ರಾಜ್ಯದಲ್ಲಿ ಕೈಗಾರಿಕೆಗಳ ಸುಸ್ಥಿರ ಬೆಳವಣಿಗೆ, ಹೂಡಿಕೆಗೆ ಉತ್ತೇಜನ ಹಾಗೂ ಅನ್ವೇಷಣಗಳಿಗೆ ಪ್ರೋತ್ಸಾಹ ನೀಡುವ ವಾತಾವರಣವನ್ನು ಪೋಷಿಸಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಬೆಂಗಳೂರು ಟೆಕ್ ಸಮಿಟ್ ೨೦೨೪ ಕುರಿತಂತೆ ಉದ್ಯಮಪತಿಗಳು, ತಂತ್ರಜ್ಞಾನ ವಲಯದ ದಿಗ್ಗಜರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ಕೈಗಾರಿಕಾ ನೀತಿ ನಿರೂಪಣೆಗಳು ಕಳೆದ ಆರ್ಥಿಕ ವರ್ಷದಲ್ಲಿ ಜಿಎಸ್‌ಡಿಪಿ ಬೆಳವಣಿಗೆ ದರವನ್ನು ಶೇಕಡ ೧೪.೨ಕ್ಕೆ ತಲುಪಿಸಿವೆ. ನವೋದ್ಯಮಗಳು, ಸಣ್ಣ ಕೈಗಾರಿಕೆಗಳು ಮತ್ತು ನಿಗಮಗಳಂತಹ ಉದ್ಯಮಗಳ ಅಗತ್ಯಾನುಸಾರ ನೀತಿಗಳನ್ನು ರೂಪಿಸಲಾಗಿದೆ. ಬೆಂಗಳೂರು ನಗರ ಕೈಗಾರಿಕೋದ್ಯಮಗಳು ಮತ್ತು ವಹಿವಾಟುದಾರರ ಆಪ್ತ ತಾಣವಾಗಿ ರೂಪುಗೊಳ್ಳಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು. ಸದೃಢ ಮೂಲಸೌಕರ್ಯ ಕುಶಲಕಾರ್ಮಿಕರು ಮತ್ತು ಕಾರ್ಯಚೌಕಟ್ಟನ್ನು ಸೃಷ್ಟಿಸಿ ರಾಜ್ಯದಲ್ಲಿ ಕೈಗಾರಿಕಾ ಬೆಳವಣಿಗೆ ಮತ್ತು ಅನ್ವೇಷಣೆಗಳ ಪ್ರಗತಿಗೆ ಕೈ ಜೋಡಿಸಬೇಕೆಂದು ಮುಖ್ಯಮಂತ್ರಿಗಳು ಉದ್ಯಮಪತಿಗಳಲ್ಲಿ ಮನವಿ ಮಾಡಿದರು. ಏಷ್ಯಾ ಖಂಡದ ಅತಿ ದೊಡ್ಡ ಮತ್ತು ಪ್ರತಿಷ್ಠಿತ ಟೆಕ್ ಸಮಿಟ್ ಅನ್ನು ಈ ವರ್ಷ ನವಂಬರ್ ೧೯ ರಿಂದ ೨೧ರವರೆಗೆ ನಡೆಸಲಾಗುವುದು ಎಂದು ಕಳೆಸ ೨೬ ವರ್ಷಗಳಿಂದ ಬೆಂಗಳೂರು ಟೆಕ್ ಸಮಿಟ್ ಕರ್ನಾಟಕ ಸರ್ಕಾರ ಮುಂಚೂಣಿ ಕಾರ್ಯಕ್ರಮವಾಗಿ ರೂಪುಗೊಂಡಿದೆ. ಈ ಶೃಂಗಸಭೆ ಕೇವಲ ಕರ್ನಾಟಕದ ಕೈಗಾರಿಕಾ ಸಾಮರ್ಥ್ಯಗಳ ಪ್ರದರ್ಶನವಾಗಿ ಉಳಿದಿಲ್ಲ. ದೇಶ ವಿದೇಶಗಳ ಉದ್ಯಮಪತಿಗಳು ತಂತ್ರಜ್ಞಗರು ಶೃಂಗಸಭೆಯಲ್ಲಿ ಪಾಲ್ಗೊಂಡು ತಮ್ಮ ಅತ್ಯಾಧುನಿಕ ಆಲೋಚನೆಗಳನ್ನು ವಿನಿಮಯ ಮಾಡಿಕೊಳ್ಳಲು ಬೃಹತ್ ವೇದಿಕೆಯಾಗಿ ರೂಪುಗೊಳ್ಳುತ್ತಿದೆ ಎಂದು ಸಿದ್ದರಾಮಯ್ಯ ಹೇಳಿದರು.

**<><*<><>*><>**

ರಾಜ್ಯಾದ್ಯಂತ ಡೆಂಘಿ ಜ್ವರದ ಪ್ರಕರಣಗಳ ನಿರ್ವಹಣೆಗೆ ಹಲವು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ದಾವಣಗೆರೆ ಜಿಲ್ಲೆಯಲ್ಲಿ ಕಳೆದ ೪೦ ದಿನಗಳಲ್ಲಿ ೨೧೨ ಡೆಂಘಿ ಪ್ರಕರಣಗಳು ದೃಢಪಟ್ಟಿದ್ದು, ಜಿಲ್ಲಾಸ್ಪತ್ರೆಯಲ್ಲಿ ಹತ್ತು ಹಾಸಿಗೆಗಳನ್ನು ಮೀಸಲಿಡಲಾಗಿದೆ ಎಂದು ಜಿಲ್ಲಾ ಡೆಂಘಿ ಮತ್ತು ಮಲೇರಿಯಾ ನಿಯಂತ್ರಣಾಧಿಕಾರಿ ಡಾ. ಗಂಗಾಧರ್ ತಿಳಿಸಿದ್ದಾರೆ. ಸೋಂಕಿತರಿಗೆ ಚಿಕಿತ್ಸೆಗಾಗಿ ಜಿಲ್ಲೆಯ ಎಲ್ಲ ತಾಲೂಕು ಆಸ್ಪತ್ರೆಗಳಲ್ಲಿ ತಲಾ ೫ ಹಾಸಿಗೆಯ ವಾರ್ಡ್‌ಗಳನ್ನು ಸಜ್ಜಾಗಿ ಇಡಲಾಗಿದೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ಜನಜಾಗೃತಿ ಕಾರ್ಯಕ್ರಮಗಳನ್ನು ಚುರುಕುಗೊಳಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಕಳೆದ ಮೂರು ವರ್ಷಗಳಲ್ಲಿ ಈ ವರ್ಷ ಡೆಂಘಿ ಪ್ರಕರಣಗಳ ಸಂಖ್ಯೆ ಜಿಲ್ಲೆಯಲ್ಲಿ ಹೆಚ್ಚಾಗುತ್ತಿದ್ದು, ಜನರು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಅವರು ಸಲಹೆ ನೀಡಿದ್ದಾರೆ. ಚಿತ್ರದುರ್ಗ ಜಿಲ್ಲೆಯಲ್ಲಿ ಡೆಂಘಿ ಜ್ವರ ಹರಡದಂತೆ ಹಾಗೂ ಸೊಳ್ಳೆಗಳು ಹೆಚ್ಚಾಗದಂತೆ ಅಗತ್ಯ ಕ್ರಮ ಕೈಗೊಳ್ಳಲು ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಿಸಿ, ಆದೇಶ ಹೊರಡಿಸಲಾಗಿದೆ. ಈ ಅಧಿಕಾರಿಗಳು ನಿಯಮಿತವಾಗಿ ತಮ್ಮ ತಮ್ಮ ಕ್ಷೇತ್ರ ವ್ಯಾಪ್ತಿಯ ಗ್ರಾಮಗಳಿಗೆ ಭೇಟಿ ನೀಡಿ, ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಪರಿಶೀಲಿಸುತ್ತಾರೆ ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಆರೋಗ್ಯ ಇಲಾಖೆ ವತಿಯಿಂದ ವಿಶ್ವ ಮಲೇರಿಯಾ ದಿನಾಚರಣೆ ಮತ್ತು ಡೆಂಘಿ ವಿರೋಧ ಮಾಸಾಚರಣೆ ಕಾರ್ಯಾಗಾರ ನಡೆಯಿತು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಕಾಂತರಾಜು ಮಾತನಾಡಿ, ಮಂಡ್ಯ ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಡೆಂಗ್ಯೂ ಪ್ರಕರಣಗಳು ಹೆಚ್ಚುತ್ತಿದೆ. ಸಾರ್ವಜನಿಕರು ಸೊಳ್ಳೆಗಳ ನಿಯಂತ್ರಣದಲ್ಲಿ ಮುತುವರ್ಜಿ ವಹಿಸದಿದ್ದರೆ ಸೊಳ್ಳೆಗಳ ನಿಯಂತ್ರಣ ಅಸಾಧ್ಯವಾಗುತ್ತದೆ. ಸಾರ್ವಜನಿಕರು ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸಿ ಎಂದು ಸಲಹೆ ನೀಡಿದರು. ಗದಗ ಜಿಲ್ಲಾ ಪಂಚಾಯತಿಯಿಂದಲೂ ಡೆಂಘೆ ನಿಯಂತ್ರಣ ಕಾರ್ಯಕ್ರಮಗಳ ಪರಿಶೀಲನೆ ನಡೆಯಿತು. ಜಿಲ್ಲೆಯಲ್ಲಿ ವ್ಯಾಪಕವಾಗಿ ಹರಡುತ್ತಿರುವ ಡೆಂಘೆ ನಿಯಂತ್ರಣಕ್ಕೆ ತುರ್ತು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಎಸ್. ಭರತ್ ಸೂಚಿಸಿದರು. ಕೊಳಚೆ ನೀರು ನಿರ್ವಹಣೆ, ವೈಯಕ್ತಿಕ ಶೌಚಾಲಯ ನಿರ್ಮಾಣ, ಕಸ ವಿಂಗಡಣೆ ಮತ್ತು ವಿಲೇವಾರಿ ವ್ಯವಸ್ಥೆಗಳನ್ನು ನಿರಂತರ ಗಮನಿಸಬೇಕು ಎಂದು ಸೂಚಿಸಿದರು. ಉತ್ತರ ಕನ್ನಡ ಜಿಲ್ಲೆಯಲ್ಲಿ ಡೆಂಘೆ ನಿಯಂತ್ರಣಕ್ಕೆ ವ್ಯಾಪಕ ಮುನ್ನೆಚ್ಚರಿಕೆ ವಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ. ಕಾರವಾರದಲ್ಲಿಂದು ಮಾತನಾಡಿದ ಅವರು, ಜಿಲ್ಲೆಯ ಎಲ್ಲಾ ಗ್ರಾಮಪಂಚಾಯಿತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಡ್ಡಾಯವಾಗಿ ಡೆಂಘೆ ನಿಯಂತ್ರಣಕ್ಕೆ ಕಾರ್ಯಕ್ರಮಗಳನ್ನು ನಡೆಸಿ ವರದಿ ಸಲ್ಲಿಸುವಂತೆ ಅವರು ಅಧಿಕಾರಿಗಳಿಗೆ ಸೂಚಿಸಿದರು. ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಒಳಚರಂಡಿಗಳ ಸ್ವಚ್ಛತೆಯನ್ನು ಗಮನಿಸಬೇಕು. ಶಾಲೆಗಳಲ್ಲಿ ಮಕ್ಕಳಿಗೆ ಸೊಳ್ಳೆ ನಿಯಂತ್ರಣ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಬೇಕು. ಹೊರ ಜಿಲ್ಲೆಗಳಿಂದ ಬರುವವರ ಆರೋಗ್ಯ ಪರಿಸ್ಥಿತಿಯನ್ನು ಗಮನಿಸಬೇಕು ಎಂದು ಅವರು ಸೂಚಿಸಿದರು.

<><*<><>*><>

ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನ ಆಲಮಟ್ಟಿ ಕೃಷ್ಣಾ ಜಲಾಶಯದಲ್ಲಿ ಇಂದು ೮೮ ಟಿಎಂಸಿ ನೀರು ಸಂಗ್ರಹ ಮಾಡಲಾಗಿದೆ. ಜಲಾಶಯದ ಗರಿಷ್ಠ ನೀರು ಸಂಗ್ರಹ ಸಾಮರ್ಥ್ಯ ೧೨೩.೦೮೧ ಟಿಎಂಸಿ. ಕೃಷ್ಣಾ ಕೊಳ್ಳದಲ್ಲಿ ಭಾರಿ ಮಳೆ ಸುರಿಯುತ್ತಿರುವುದರಿಂದ ಮಹಾರಾಷ್ಟ್ರದ ಕೊಯ್ನಾ ಜಲಾಶಯ ಸೇರಿದಂತೆ ವಿವಿಧ ಜಲಾಶಯಗಳಿಂದ ಆಲಮಟ್ಟಿಗೆ ೩೪ ಸಾವಿರ ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಜಲಾಶಯದಿಂದ ೩ ಸಾವಿರ ಕ್ಯೂಸೆಕ್ ನೀರನ್ನು ಆಲಮಟ್ಟಿ ಜಲ ವಿದ್ಯುದಾಗಾರಕ್ಕೆ ವಿದ್ಯುತ್ ಉತ್ಪಾದನೆಗಾಗಿ ಹರಿಸಲಾಗುತ್ತದೆ.೫೧೯.೬೦ ಮೀಟರ್ ಗರಿಷ್ಠ ಎತ್ತರವಿರುವ ಜಲಾಶಯದಲ್ಲಿ ೫೧೭.೨೨ ಮೀಟರ್‌ವರೆಗೆ ನೀರು ನಿಲ್ಲಿಸಲಾಗಿದೆ ಎಂದು ಆಲಮಟ್ಟಿ ಜಲಾಶಯದ ಅಧಿಕಾರಿಗಳು ಮಾಹಿತಿ ನೀಡಿರುವುದಾಗಿ ನಮ್ಮ ಜಿಲ್ಲಾ ಪ್ರತಿನಿಧಿ ವರದಿ ಮಾಡಿದ್ದಾರೆ.

<><*<><>*><>

ಕೇಂದ್ರೀಯ ಮೀಸಲು ಪೊಲೀಸ್ ಪಡೆ - ಸಿಆರ್‌ಪಿಎಫ್‌ನಲ್ಲಿ ಅಗ್ನಿವೀರರಾಗಿ ಸೇವೆ ಸಲ್ಲಿಸಿರುವ ಯುವಕರನ್ನು ನೇಮಕ ಮಾಡಿಕೊಳ್ಳಲು ವ್ಯವಸ್ಥೆಯಾಗಿದೆ. ಇದಕ್ಕೆ ತಕ್ಕಂತೆ ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಲಾಗಿದೆ. ಅಗ್ನಿವೀರರಾಗಿ ಕಾರ್ಯ ನಿರ್ವಹಿಸಿದ ಯುವಕರಿಗೆ ಸಿಆರ್‌ಪಿಎಫ್‌ನಲ್ಲಿ ಶೇಕಡ ೧೦ರಷ್ಟು ಮೀಸಲಾತಿ ಕಲ್ಪಿಸಲಾಗುವುದು ಎಂದು ಸಿಆರ್‌ಪಿಎಫ್ ಮಹಾನಿರ್ದೇಶಕರಾದ ಅನೀಶ್ ದಯಾಳ್ ಸಿಂಗ್ ತಿಳಿಸಿದ್ದಾರೆ. ಗಡಿ ಭದ್ರತಾ ಪಡೆ ಮತ್ತು ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆಯಲ್ಲಿ ಮಾಜಿ ಅಗ್ನಿವೀರರ ಮರುನೇಮಕಕ್ಕೆ ಶೇಕಡ ೧೦ರಷ್ಟು ಮೀಸಲಾತಿ ಕಲ್ಪಿಸಲು ಕೇಂದ್ರ ಗೃಹ ಸಚಿವಾಲಯ ನಿರ್ಧರಿಸಿದೆ. ಈ ನೇಮಕದ ವೇಳೆ ಅಗ್ನಿವೀರರಿಗೆ ದೈಹಿಕ ಪರೀಕ್ಷೆಯಿಂದ ವಿನಾಯಿತಿ ಇರಲಿದೆ. ಮಾಜಿ ಅಗ್ನಿವೀರರಿಗೆ ಮರುನೇಮಕಾತಿ ಸಂದರ್ಭದಲ್ಲಿ ವಯೋಮಿತಿಯ ಮಾನದಂಡವನ್ನು ಸಡಿಗೊಳಿಸಲಾಗುವುದು ಎಂದು ಗಡಿ ಭದ್ರತಾಪಡೆ, ಕೇಂದ್ರ ಮೀಸಲು ಪೊಲೀಸ್ ಪಡೆ, ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆ ಮತ್ತು ಸಶಸ್ತ್ರ ಸೀಮಾಬಲ ಪಡೆಗಳ ಮುಖ್ಯಸ್ಥರು ತಿಳಿಸಿದ್ದಾರೆ. ಈ ಕುರಿತು ಮಾತನಾಡಿದ, ಸಿಐಎಸ್‌ಎಫ್‌ನ ಮಹಾನಿರ್ದೇಶಕರಾದ ನಿನಾ ಸಿಂಗ್, ಮಾಜಿ ಅಗ್ನಿವೀರರನ್ನು ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆಗೆ ನೇಮಕ ಮಾಡಿಕೊಳ್ಳುವ ಕುರಿತಂತೆ ಗೃಹ ಸಚಿವಾಲಯ ಪ್ರಮುಖ ಹೆಜ್ಜೆಯನ್ನಿಟ್ಟಿದೆ. ಈ ಕುರಿತಂತೆ ಸಕಲ ಸಿದ್ಧತೆಯನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಕನ್ನಡ ಚಿತ್ರರಂಗದ ನಟಿ, ಖ್ಯಾತ ನಿರೂಪಕಿ ಅಪರ್ಣಾ ಅವರ ನಿಧನಕ್ಕೆ ರಾಜ್ಯದೆಲ್ಲೆಡೆಯಿಂದ ಸಂತಾಪ ಹರಿದು ಬರುತ್ತಿದೆ. ಕನ್ನಡ ಭಾಷೆಯಲ್ಲಿ ಅತ್ಯಂತ ಸೊಗಸಾಗಿ ನಿರೂಪಣೆ ಮಾಡುತ್ತಾ, ನಾಡಿನ ಮನೆಮಾತಾಗಿದ್ದ, ಬಹುಮುಖ ಪ್ರತಿಭೆಯೊಂದು ಬಹುಬೇಗ ಅಗಲಿರುವುದು ದುಃಖದ ಸಂಗತಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ

ಕಂಬನಿ ಮಿಡಿದಿದ್ದಾರೆ. ಸೊಗಸಾದ ಕನ್ನಡ ಪದಗಳ ಮೂಲಕವೇ ಜನಮನ ಗೆದ್ದ ನಾಡಿನ ಜನಪ್ರಿಯ ಕಾರ್ಯಕ್ರಮ ನಿರೂಪಕಿ ಅಪರ್ಣಾ ಅವರ ನಿಧನದ ಸುದ್ದಿಯಿಂದ ಮನಸ್ಸಿಗೆ ಆಘಾತವಾಗಿದೆ. ಮೃತರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸಾಮಾಜಿಕ ಮಾಧ್ಯಮದಲ್ಲಿ ಪ್ರತಿಕ್ರಿಯಿಸಿದ್ದಾರೆ. ಕನ್ನಡದ ಖ್ಯಾತ ನಟಿ, ನಿರೂಪಕಿ ಅಪರ್ಣಾ ಅವರ ನಿಧನದ ಸುದ್ದಿ ತಿಳಿದು ದುಃಖವಾಯಿತು ಅವರ, ನಿರೂಪಣೆ ಮತ್ತು ಅಭಿನಯ ಶೈಲಿ ಚಿರಸ್ಮರಣೀಯವಾಗಿರುತ್ತದೆ. ನಾಡಿನ ಪ್ರತಿಭಾವಂತ ಕಲಾವಿದೆಯೊಬ್ಬರ ಅಗಲಿಕೆಗೆ ತೀವ್ರ ಸಂತಾಪಗಳು ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಕನ್ನಡದ ಖ್ಯಾತ ನಿರೂಪಕಿ ಅಪರ್ಣಾ ಅವರ ನಿಧನಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ರಾಜ್ಯ ಸರ್ಕಾರದ ಅಧಿಕೃತ ಸಮಾರಂಭಗಳು ಹಾಗೂ ಖಾಸಗಿ ಕಾರ್ಯಕ್ರಮಗಳಲ್ಲಿ ಅಚ್ಚ ಕನ್ನಡದಲ್ಲಿ ಅಚ್ಚುಕಟ್ಟಾದ ನಿರೂಪಣೆಗೆ ಹೆಸರಾಗಿದ್ದ ಅಪರ್ಣಾ ಅವರ ಅಕಾಲಿಕ ಸಾವಿನ ಸುದ್ದಿಯಿಂದ ಆಘಾತವಾಗಿದೆ. ದೂರದರ್ಶನದ ಕಾರ್ಯಕ್ರಮಗಳು ಹಾಗೂ ಬೆಂಗಳೂರು ಮೆಟ್ರೋದಲ್ಲಿ ಪ್ರಯಾಣಿಕರಿಗೆ ಸೂಚನೆ ನೀಡುತ್ತಿದ್ದ ಅವರ ಧ್ವನಿ ರಾಜ್ಯದಲ್ಲಿ ಚಿರಪರಿಚಿತವಾಗಿತ್ತು ಎಂದು ಅವರು ಸಂತಾಪ ವ್ಯಕ್ತಪಡಿಸಿದ್ದಾರೆ. ಬೆಂಗಳೂರು ಮೆಟ್ರೊ ರೈಲುಗಳಲ್ಲಿ ಇಂದು ಅಪರ್ಣಾ ಅವರಿಗೆ ಶ್ರದ್ಧಾಂಜಲಿಯ ಧ್ವನಿ ಸಂದೇಶವನ್ನು ನೀಡಲಾಯಿತು. ಮೆಟ್ರೊ ನಿಲ್ದಾಣಗಳಲ್ಲಿ ಅವರ ಭಾವಚಿತ್ರ ಪ್ರದರ್ಶಿಸುವ ಮೂಲಕ ಸಂತಾಪ ಸೂಚಿಸಲಾಗಿದೆ. ಇಂದು ಬೆಳಗ್ಗೆಯಿಂದಲೇ ಬೆಂಗಳೂರು ಬನಶಂಕರಿಯಲ್ಲಿರುವ ಅಪರ್ಣಾ ಅವರ ನಿವಾಸಕ್ಕೆ ಆಗಮಿಸಿದ ಅವರ ಮಿತ್ರರು ಮತ್ತು ಅಭಿಮಾನಿಗಳು ತಮ್ಮ ನೆಚ್ಚಿನ ಕಲಾವಿದೆಗೆ ಅಂತಿಮ ನಮನ ಸಲ್ಲಿಸಿದರು. ಬನಶಂಕರಿ ಚಿತಾಗಾರದಲ್ಲಿ ಅಂತ್ಯಸಂಸ್ಕಾರವನ್ನು ನೆರವೇರಿಸಲಾಯಿತು.

**<><*<><>*><>**

ಆಷಾಡ ಮಾಸದ ಮೊದಲ ಶುಕ್ರವಾರದ ಹಿನ್ನೆಲೆಯಲ್ಲಿ ಮೈಸೂರಿನ ಚಾಮುಂಡಿ ದೇವಾಲಯಕ್ಕೆ ಇಂದು ಸಾವಿರಾರು ಜನರು ಭೇಟಿ ನೀಡುತ್ತಿದ್ದಾರೆ. ಮೈಸೂರು, ಹಾಸನ, ಚಾಮರಾಜನಗರ, ಮಡಿಕೇರಿ ಅಲ್ಲದೆ, ತಮಿಳುನಾಡು, ಆಂಧ್ರಪ್ರದೇಶ ಮತ್ತು ಮಹಾರಾಷ್ಟ್ರ ರಾಜ್ಯಗಳ ಜನರು ಸರಥಿ ಸಾಲಿನಲ್ಲಿ ನಿಂತು, ದೇವರ ದರ್ಶನ ಪಡೆಯುತ್ತಿದ್ದಾರೆ. ನಾಡಿನ ಅಧಿದೇವತೆಯಾದ ಚಾಮುಂಡೇಶ್ವರಿಗೆ ವಿಶೇಷ ಅಲಂಕಾರ ಮಾಡಲಾಗಿದೆ. ಆಷಾಡ ಮಾಸದ ಶುಕ್ರವಾರಗಳಂದು ಮೈಸೂರು ಚಾಮುಂಡೇಶ್ವರಿ ದೇವಸ್ಥಾನಕ್ಕೆ ಬರುವ ಜನರ ಅನುಕೂಲಕ್ಕಾಗಿ ಸೂಕ್ತ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ. ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದ್ದಾರೆ.

**<><*<><>*><>**

ದಿವ್ಯಾಂಗ ಜನರ ಸಬಲೀಕರಣ ಇಲಾಖೆಯು ವಿಶೇಷಚೇತನರನ್ನು ಸಬಲೀಕರಣಗೊಳಿಸುವಲ್ಲಿ ನಿರತವಾಗಿರುವ ಸಂಸ್ಥೆಗಳಿಂದ ರಾಷ್ಟ್ರೀಯ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಿದೆ. ವಿಶೇಷಚೇತನರ ಸಬಲೀಕರಣಕ್ಕಾಗಿ ಕೆಲಸ ಮಾಡುವ ಸಂಸ್ಥೆಗಳನ್ನು ಸಬಲೀಕರಣಗೊಳಿಸುವುದು, ಗುರುತಿಸುವುದು ಮತ್ತು ಪ್ರೋತ್ಸಾಹಿಸುವುದು ಈ ಪ್ರಶಸ್ತಿಯ ಉದ್ದೇಶವಾಗಿದೆ ಎಂದು ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ತಿಳಿಸಿದೆ. ೨೦೨೪ನೇ ಸಾಲಿನ ಈ ರಾಷ್ಟ್ರೀಯ ಪ್ರಶಸ್ತಿಗಳಿಗಾಗಿ ಆನ್‌ಲೈನ್ ನಾಮನಿರ್ದೇಶನಕ್ಕೆ ಇದೇ ೩೧ ಕೊನೆಯ ದಿನವಾಗಿದೆ. ಪ್ರತಿ ವರ್ಷ ಡಿಸೆಂಬರ್ ೩ ರಂದು ವಿಶೇಷಚೇತನರ ಅಂತರಾಷ್ಟ್ರೀಯ ದಿನದ ಸಂದರ್ಭದಲ್ಲಿ ವ್ಯಕ್ತಿಗಳು, ಸಂಸ್ಥೆಗಳು, ರಾಜ್ಯಗಳು ಮತ್ತು ಜಿಲ್ಲೆಗಳಿಗೆ ಪ್ರಶಸ್ತಿಗಳನ್ನು ನೀಡಲಾಗುತ್ತದೆ.

**<><*<><>*><>**

೧. ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಸರ್ಕಾರಿ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣದ ಶಕ್ತಿ ಯೋಜನೆ ಒಂದು ವರ್ಷ ಪೂರ್ಣಗೊಳಿಸಿದ್ದು, ಉತ್ತರ ಕನ್ನಡ ಜಿಲ್ಲೆಯಲ್ಲಿ ಕಳೆದ ತಿಂಗಳ ಅಂತ್ಯದವರೆಗೆ ೬ ಕೋಟಿ ೧೯ ಲಕ್ಷ ಮಹಿಳೆಯರು ಯೋಜನೆಯ ಪ್ರಯೋಜನ ಪಡೆದಿದ್ದಾರೆ ಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಕ ಶ್ರೀನಿವಾಸ ಮಾಹಿತಿ ನೀಡಿದ್ದಾರೆ. ಅಜಿಲ್ಲೆಗೆ ಅಗತ್ಯವಿರುವ ಹೆಚ್ಚುವರಿ ಬಸ್‌ಗಳು ಮತ್ತು ಸಿಬ್ಬಂದಿಯ ನೇಮಕಾತಿ ಕುರಿತಂತೆ ಹಿರಿಯ ಅಧಿಕಾರಿಗಳಿಗೆ ಪ್ರಸ್ತಾವ ಸಲ್ಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಸ ಸಮಾಚಾರ ಮುಗಿಯಿತು <>*><>**